April 14, 2024
ALL INDIA RADIO- DHARWAD
PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಲೋಕಸಭಾ ಚುನಾವಣೆ: ರಂಗೇರುತ್ತಿರುವ ಪ್ರಚಾರ: ಮತದಾರರ ಓಲೈಕೆಗೆ ವಿವಿಧ ಪಕ್ಷಗಳಿಂದ ಬಿರುಸಿನ ಯತ್ನ.

- ಲೋಕಸಭಾ ಚುನಾವಣೆ ಹಿನ್ನಲೆ: ವಿವಿಧ ಜಿಲ್ಲಾಡಳಿತಗಳಿಂದ ಅಗತ್ಯ ಸಿದ್ಧತೆ.

- ಇಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ ಅವರ ಜನ್ಮದಿನ: ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ಗೌರವ ನಮನ.

- ರಾಜ್ಯದಲ್ಲಿ ಹೆಚ್ಚುತ್ತಿರುವ ತಾಪಮಾನ: ಆರೋಗ್ಯದ ಹಿತದೃಷ್ಟಿಯಿಂದ ಮುಂಜಾಗ್ರತೆವಹಿಸಲು ಆರೋಗ್ಯ ಇಲಾಖೆ ಸಲಹೆ.

ಈಗ ವಾರ್ತೆಗಳ ವಿವರ

*******

ಲೋಕಸಭಾ ಚುನಾವಣೆ ಹಿನ್ನೆಲೆ, ಮೊದಲ ಹಂತದ ಚುನಾವಣೆ ನಡೆಯುವ ಕ್ಷೇತ್ರಗಳಲ್ಲಿ ಪ್ರಚಾರ ರಂಗೇರುತ್ತಿದೆ. ವಿವಿಧ ಪಕ್ಷಗಳ ನಾಯಕರು ತಮ್ಮ, ತಮ್ಮ ಪಕ್ಷಗಳ ಅಭ್ಯರ್ಥಿಗಳ ಪರ ಬಿರುಸಿನ ಪ್ರಚಾರದಲ್ಲಿ ತೊಡಗಿದ್ದಾರೆ.

ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಇಂದು ಮಂಗಳೂರಿನಲ್ಲಿ ರೋಡ್ ಶೋ ನಡೆಸಲಿದ್ದಾರೆ. ಈ ಹಿನ್ನೆಲೆಯಲ್ಲಿ ನಗರದಲ್ಲಿ ಸಂಚಾರ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಿ ನಗರ ಪೊಲೀಸ್ ಆಯುಕ್ತ ಅನುಪಮ ಅಗರ್‌ವಾಲ್ ಆದೇಶ ಹೊರಡಿಸಿದ್ದಾರೆ.

ಮಂಗಳೂರಿನ ಲೇಡಿಹಿಲ್ ಬಳಿಯ ಶ್ರೀ ನಾರಾಯಣಗುರು ವೃತ್ತದಿಂದ ರಾಷ್ಟ್ರಕವಿ ಮಂಜೇಶ್ವರ ಗೋವಿಂದ ಪೈ ವೃತ್ತದವರೆಗೆ ಸಂಜೆ 6 ರಿಂದ ನಡೆಯಲಿರುವ ರೋಡ್ ಶೋ ನಲ್ಲಿ ಪ್ರಧಾನಿ ಭಾಗವಹಿಸಲಿದ್ದು, ಭದ್ರತೆಯ ದೃಷ್ಟಿಯಿಂದ ಮಧ್ಯಾಹ್ನ 2 ಗಂಟೆಯಿಂದ ಪ್ರಧಾನಿ ಕಾರ್ಯಕ್ರಮ ಮುಗಿಯುವವರೆಗೆ ರೋಡ್ ಶೊ ನಡೆಯುವ ವ್ಯಾಪ್ತಿಯಲ್ಲಿ ವಾಹನ ಸಂಚಾರ ನಿ ೀಧಿಸಲಾಗಿದೆ. ವಾಹನಗಳ ಸಂಚಾರಕ್ಕಾಗಿ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ ಎಂದು ಪೊಲೀಸ್ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರಿನಲ್ಲಿ ನಡೆಯಲಿರುವ ಬಿಜೆಪಿ ಸಮಾವೇಶದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಪಾಲ್ಗೊಳ್ಳಲಿದ್ದು, ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಈ ಕುರಿತು ಮಾಹಿತಿ ನೀಡಿದ ಶಾಸಕ ಟಿ.ಎಸ್.ಶ್ರೀವತ್ಸ, ಜೆಡಿಎಸ್–ಬಿಜೆಪಿ ಜಂಟಿ ಚುನಾವಣಾ ಪ್ರಚಾರದ ಸಮಾವೇಶಕ್ಕೆ ಮಹಾರಾಜ ಕಾಲೇಜು ಮೈದಾನದಲ್ಲಿ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ವರಿಷ್ಠ ಮುಖಂಡರು ಭಾಗಿಯಾಗಲಿದ್ದು, 4 ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯ ಕಾರ್ಯಕರ್ತರು ಪಾಲ್ಗೊಳ್ಳಲಿದ್ದಾರೆ ಎಂದರು.

*******

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕೃ ್ಣರಾಜ ಕ್ಷೇತ್ರದಲ್ಲಿ ನಿನ್ನೆ ಜನಧ್ವನಿ–2 ಯಾತ್ರೆ ಸಮಾವೇಶಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಸಚಿವ ಎಚ್.ಸಿ.ಮಹದೇವಪ್ಪ, ಕೆ.ಪಿ.ಸಿ.ಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್, ಶಾಸಕ ಹರೀಶ್‌ಗೌಡ, ವಿಧಾನಪರಿ ‘ತ್ ಸದಸ್ಯ ತಿಮ್ಮಯ್ಯ ಸೇರಿದಂತೆ ಪಕ್ಷದ ಹಲವು ನಾಯಕರು ಪಾಲ್ಗೊಂಡಿದ್ದರು.

*******

ಲೋಕಸಭಾ ಚುನಾವಣೆ ಹಿನ್ನೆಲೆ, ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ವ್ಯಾಪ್ತಿಯ ವಿವಿಧ ಪ್ರದೇಶಗಳಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಿನ್ನೆ ಚುನಾವಣಾ ಪ್ರಚಾರ ಕೈಗೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಖಾತರಿ ಯೋಜನೆಗಳ ಮೂಲಕ ಜನರ ಬದುಕಿಗೆ ಆಸರೆಯಾಗಿದೆ. ಜನಪರ ಕಾಳಜಿಯೊಂದಿಗೆ ಎಲ್ಲ ಜನರಿಗೆ ಹತ್ತಿರವಾಗಿದ್ದು, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಪಕ್ಷ ಹೆಚ್ಚಿನ ಗೆಲುವು ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

*******

ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರು ನಿನ್ನೆ ಹಾವೇರಿ ಜಿಲ್ಲೆ ಸವಣೂರು ತಾಲ್ಲೂಕಿನ ಕಳಸೂರು, ಹಿರೇಮುಗದೂರು, ಡೊಂಬರ ಮತ್ತೂರು, ಹಿರೇಮರಳಿಹಳ್ಳಿ, ಇಚ್ಚಂಗಿ, ಹೆಸರೂರು ಗ್ರಾಮಗಳಲ್ಲಿ ರೋಡ್ ಶೋ ಮೂಲಕ ಮತಯಾಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಂವಿಧಾನ ಕುರಿತ ಪ್ರತಿಪಕ್ಷಗಳ ಆರೋಪ ನಿರಾಧಾರ ಮತ್ತು ಜನರನ್ನು ದಿಕ್ಕು ತಪ್ಪಿಸುವ ತಂತ್ರ. ಭಾರತವನ್ನು ಭಯೋತ್ಪಾದನೆ ಮುಕ್ತ ರಾಷ್ಟ್ರವನ್ನಾಗಿ ಮಾಡಲು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪಣತೊಟ್ಟಿದ್ದು, ದೇಶದ ಅಭಿವೃದ್ಧಿಗಾಗಿ ಬಿಜೆಪಿಗೆ ಮತ ನೀಡುವಂತೆ ಮನವಿ ಮಾಡಿದರು.

ಇನ್ನೊಂದೆಡೆ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರ ಜಿಲ್ಲೆಯ ಹಾನಗಲ್ ತಾಲ್ಲೂಕಿನ ಅಕ್ಕಿಆಲೂರು, ಮಾರನಬೀಡ, ಅರಳೇಶ್ವರ ಗ್ರಾಮಗಳಲ್ಲಿ ಶಾಸಕ ಶ್ರೀನಿವಾಸ ಮಾನೆ ಪ್ರಚಾರ ನಡೆಸಿದರು.

*******

ಬರುವ ಲೋಕಸಭಾ ಚುನಾವಣೆ ಹಿನ್ನೆಲೆ, ಮತದಾನ, ಮತದಾನ ಪ್ರಮಾಣ ಹೆಚ್ಚಳ ಹಾಗೂ ಕಡ್ಡಾಯ ಮತದಾನ ಕುರಿತು ಅರಿವು ಮೂಡಿಸುವ ಹಾಗೂ ಸುಗಮ ಚುನಾವಣೆ ನಡೆಸುವ ನಿಟ್ಟಿನಲ್ಲಿ ವಿವಿಧ ಜಿಲ್ಲಾಡಳಿತಗಳು ಅಗತ್ಯ ಸಿದ್ಧತೆ ನಡೆಸಿವೆ.

ಕೊಡಗು ಜಿಲ್ಲೆಯಲ್ಲಿ ಪಾರದರ್ಶಕ, ಸುಗಮ ಮತ್ತು ಶಾಂತಿಯುತ ಮತದಾನ ನಡೆಸುವ ಸಂಬಂಧ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಇದೇ 24 ರ ಸಂಜೆ 5 ಗಂಟೆಯಿಂದ 26 ರ ಸಂಜೆ 5 ಗಂಟೆವರೆಗೆ ಜಿಲ್ಲೆಯಾದ್ಯಂತ ಸೆಕ್ಷನ್ 144 ರನ್ವಯ ನಿ ೀಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ವೆಂಕಟ್‌ರಾಜಾ ಆದೇಶ ಹೊರಡಿಸಿದ್ದಾರೆ.

ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಇದೇ 26 ರಂದು ಮತದಾನ ನಡೆಯಲಿದ್ದು, ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಾಗೂ ಮತದಾರರು ಮತ ಹಾಕಲು ಅನುಕೂಲ ಕಲ್ಪಿಸುವ ದೃಷ್ಟಿಯಿಂದ 26 ರಂದು ಬೆಳಿಗ್ಗೆ 5 ಗಂಟೆಯಿಂದ ರಾತ್ರಿ 8 ಗಂಟೆಯವರೆಗೆ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಪ್ರದೇಶಗಳಲ್ಲಿ ಸಂತೆ ಮತ್ತು ಎಲ್ಲಾ ತರಹದ ಜಾತ್ರೆಗಳನ್ನು ನಿ ೀಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಶಿಲ್ಪಾ ನಾಗ್ ಆದೇಶಿಸಿದ್ದಾರೆ.

ಧಾರವಾಡ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಮೇ 7 ರಂದು ಮತದಾನ ಜರುಗಲಿದ್ದು, ಅಂದು ಜಿಲ್ಲೆಯ 1660 ಮತಗಟ್ಟೆಗಳಲ್ಲಿ ಕರ್ತವ್ಯ ನಿರ್ವಹಿಸಲು ಒಟ್ಟು 4477 ಜನ ಪಿಆರ್.ಓ ಮತ್ತು ಎಪಿಆರ್.ಓ ಗಳಿಗೆ ಜಿಲ್ಲೆಯ ಏಳು ಸ್ಥಳಗಳಲ್ಲಿ ಇಂದು ಯಶಸ್ವಿಯಾಗಿ ಮೊದಲ ಹಂತದ ತರಬೇತಿ ನೀಡಲಾಗಿದೆ ಎಂದು ಚುನಾವಣಾಧಿಕಾರಿ ದಿವ್ಯಪ್ರಭು ಮಾಹಿತಿ ನೀಡಿದ್ದಾರೆ.

ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ, ಉತ್ತರ ಕನ್ನಡ ಜಿಲ್ಲೆಯಲ್ಲಿ ಚುನಾವಣೆಗೆ ಸ್ಪರ್ಧಿಸುವ ಎಲ್ಲ ಅಭ್ಯರ್ಥಿಗಳ ದೈನಂದಿನ ಖರ್ಚು ವೆಚ್ಚಗಳ ಬಗ್ಗೆ ಲೆಕ್ಕಪತ್ರ ಪರಿಶೀಲನಾ ತಂಡ ಹೆಚ್ಚಿನ ನಿಗಾವಹಿಸಿ, ಕಾರ್ಯನಿರ್ವಹಿಸುವಂತೆ ಉತ್ತರಕನ್ನಡ ಲೋಕಸಭಾ ಕ್ಷೇತ್ರದ ವೆಚ್ಚ ವೀಕ್ಷಕ ಪ್ರಶಾಂತ್ ಸಿಂಗ್ ಸೂಚಿಸಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಿನ್ನೆ ನಡೆದ, ಚುನಾವಣಾ ವೆಚ್ಚ ವೀಕ್ಷಣಾ ತಂಡದ ಅಧಿಕಾರಿಗಳ ಸಭೆಯಲ್ಲಿ ಅವರು ಈ ಸೂಚನೆ ನೀಡಿದರು.

*******

ಮತದಾನ ಜಾಗೃತಿ ಅಂಗವಾಗಿ ದಾವಣಗೆರೆಯಲ್ಲಿ ಸಾಂಸ್ಕೃತಿಕ ಸಂಜೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಸುರೇಶ್ ಇಟ್ನಾಳ್ ಹೇಳಿದ್ದಾರೆ.

ಈ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸಿ ಯುವ ಮತದಾರರನ್ನು ಮತಗಟ್ಟೆಗೆ ಸೆಳೆಯಲಾಗುವುದು. ಕಡಿಮೆ ಮತದಾನವಾದ 135 ಮತಗಟ್ಟೆಗಳ ಮೇಲೆ ನಿಗಾವಹಿಸಿ ಈ ಬಾರಿ ಹೆಚ್ಚು ಮತದಾನವಾಗುವಂತೆ ಕ್ರಮ ವಹಿಸಲಾಗುವುದು ಎಂದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಇಂದು 'ಸಂವಿಧಾನ ಶಿಲ್ಪಿ' ಡಾಕ್ಟರ್ ಬಿ.ಆರ್.ಅಂಬೇಡ್ಕರ್ ಅವರ ಜಯಂತಿ. ಪ್ರತಿ ವರ್ಷ ಏಪ್ರಿಲ್ 14 ರಂದು, ಭಾರತ ಕಂಡ ಶ್ರೇಷ್ಠ ನಾಯಕರಲ್ಲಿ ಒಬ್ಬರಾದ ಡಾಕ್ಟರ್ ಬಿ.ಆರ್.ಅಂಬೇಡ್ಕರ್ ಅವರ ಜಯಂತಿಯನ್ನು ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ಆಚರಿಸಿ, ಗೌರವ ಸಲ್ಲಿಸಲಾಗುತ್ತದೆ.

ಸಾಮಾಜಿಕ ಸಮಾನತೆ, ಅಸ್ಪೃಶ್ಯತಾ ನಿವಾರಣೆಗಾಗಿ ಹೋರಾಡಿದ ಮಹಾನ್ ನಾಯಕರಲ್ಲಿ ಒಬ್ಬರಾದ ಡಾ.ಅಂಬೇಡ್ಕರ ಅವರನ್ನು ಸಂವಿಧಾನ ಶಿಲ್ಪಿ ಎಂದು ಕರೆಯಲಾಗುತ್ತದೆ.

ಡಾಕ್ಟರ್ ಬಿ.ಆರ್.ಅಂಬೇಡ್ಕರ್ ಅವರ 133 ನೇ ಜನ್ಮ ದಿನಾಚರಣೆ ಪ್ರಯುಕ್ತ, ಸಮಾಜ ಕಲ್ಯಾಣ ಇಲಾಖೆ ವತಿಯಿಂದ, ಇಂದು ಬೆಳಿಗ್ಗೆ 10 ಗಂಟೆಗೆ, ಬೆಂಗಳೂರಿನ ವಿಧಾನಸೌಧದ ಮುಂಭಾಗ, ಡಾಕ್ಟರ್ ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ರಾಜ್ಯ ವಾರ್ತಾ ಇಲಾಖೆ ತಿಳಿಸಿದೆ.

ಡಾ.ಅಂಬೇಡ್ಕರ ಅವರ ಜಯಂತಿ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ನಾಡಿನ ಜನತೆಗೆ ಶುಭಾಶಯ ಕೋರಿದ್ದಾರೆ. ಅವರ ಆದರ್ಶಗಳನ್ನು ಅಳವಡಿಸಿಕೊಂಡು ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದ್ದಾರೆ.

*******

ರಾಜ್ಯದಲ್ಲಿ ದಿನದಿಂದ ದಿನಕ್ಕೆ ತಾಪಮಾನ ಹೆಚ್ಚಳವಾಗುತ್ತಿದ್ದು, ಇದರಿಂದ ವಿವಿಧ ಅನಾರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತಿವೆ. ಆದ್ದರಿಂದ ಆರೋಗ್ಯ ಕಾಪಾಡಿಕೊಳ್ಳಲು ಆದ್ಯತೆ ನೀಡಬೇಕು ಎಂದು ರಾಜ್ಯ ಆರೋಗ್ಯ ಇಲಾಖೆ ತಿಳಿಸಿದೆ.

ಕಲುಷಿತ ನೀರು ಸೇವನೆ ಹಾಗೂ ಬೀದಿ ಬದಿ ತೆರೆದಿಟ್ಟ ಆಹಾರ ಸೇವನೆಯಿಂದ ಕಾಲರಾ ಸೋಂಕು ಕಾಣಿಸಿಕೊಳ್ಳುವ ಸಾಧ್ಯತೆ ಇದೆ. ಇದರಿಂದಾಗಿ ವ್ಯಕ್ತಿಯ ದೇಹದಲ್ಲಿ ವಾಂತಿ, ಭೇದಿ, ನಿರ್ಜಲೀಕರಣ, ಅತಿಸಾರ ಉಂಟಾಗಿ ವ್ಯಕ್ತಿಯು ನಿತ್ರಾಣ ಗೊಳ್ಳುತ್ತಾನೆ.

ರಾಜ್ಯದ ಕೆಲವೆಡೆ ಕೆಲ ದಿನಗಳಿಂದ ಕಾಲರಾ ರೋಗಲಕ್ಷಣವಿರುವ ಪ್ರಕರಣಗಳು ಹೆಚ್ಚಾಗುತ್ತಿದ್ದು, ವೈಯಕ್ತಿಕ ಸ್ವಚ್ಛತೆಗೆ ಹೆಚ್ಚು ಆದ್ಯತೆ ನೀಡದಿರುವುದು ಇದಕ್ಕೆ ಕಾರಣ. ಆದ್ದರಿಂದ ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿ ವಹಿಸಿ. ಶುದ್ಧವಾದ ನೀರು, ಪೌಷ್ಟಿಕಾಂಶಯುಕ್ತ ಆಹಾರವನ್ನೇ ಸೇವಿಸಿ. ರೋಗಲಕ್ಷಣಗಳು ಕಾಣಿಸಿಕೊಂಡಾಗ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಪಡೆಯುವುದರಿಂದ ಸೋಂಕಿನಿಂದ ಚೇತರಿಸಿಕೊಳ್ಳಬಹುದು ಎಂದು ಆರೋಗ್ಯ ಇಲಾಖೆ ಸಲಹೆ ನೀಡಿದೆ.

*******

ಕುಡಿಯುವ ನೀರಿನ ಸಮಸ್ಯೆಗೆ ಸ್ಪಂದಿಸಲು ಅಧಿಕಾರಿಗಳು ದಿನದ 24 ಗಂಟೆಯೂ ಜಾಗೃತರಾಗಿ ಕಾರ್ಯ ನಿರ್ವಹಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಯಾದಗಿರಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಮುಂಜಾಗ್ರತೆ ವಹಿಸುವ ಕ್ರಮಗಳ ಕುರಿತು ಅಧಿಕಾರಿಗಳೊಂದಿಗೆ

ಸಭೆ ನಡೆಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ತಾಪಮಾನ ಹೆಚ್ಚಳವಾಗುತ್ತಿದ್ದು, ಸಾರ್ವಜನಿಕರಿಗೆ ಆರೋಗ್ಯದ ಹಿತದೃಷ್ಟಿಯಿಂದ ಸುರಕ್ಷತಾ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.

*******

ಬಿಸಿಲಿನ ಶಾಖಕ್ಕೆ ಚಿಕ್ಕಮಗಳೂರು ಜಿಲ್ಲೆಯ ಹಲವೆಡೆ ಕಾಫಿ ಮತ್ತು ಕಾಳು ಮೆಣಸು ಬಳ್ಳಿಗಳು ಒಣಗಲಾರಂಭಿಸಿದ್ದು, ತರೀಕೆರೆ, ಕಡೂರು, ಅಜ್ಜಂಪುರ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ.

ಮೂಡಿಗೆರೆ ತಾಲೂಕಿನಲ್ಲೂ ನೀರಿನ ಸಮಸ್ಯೆ ಉಂಟಾಗಿದ್ದು ಮೂಡಿಗೆರೆ ಪಟ್ಟಣಕ್ಕೆ ಸರಬರಾಜಾಗುವ ಸುಂಡೇಕೆರೆ ಹಳ್ಳ, ಕಿತ್ತಲೆಗಂಡಿ ಹೇಮಾವತಿ ನದಿಯಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದ್ದು, ನೀರು ಪೂರೈಕೆಯಲ್ಲಿ ವ್ಯತ್ಯಯವಾಗುತ್ತಿದೆ ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ತಿಳಿಸಿದ್ದಾರೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಲೋಕಸಭಾ ಚುನಾವಣೆ: ರಂಗೇರುತ್ತಿರುವ ಪ್ರಚಾರ: ಮತದಾರರ ಓಲೈಕೆಗೆ ವಿವಿಧ ಪಕ್ಷಗಳಿಂದ ಬಿರುಸಿನ ಪ್ರಯತ್ನ.

ಲೋಕಸಭಾ ಚುನಾವಣೆ ಹಿನ್ನಲೆ: ವಿವಿಧ ಜಿಲ್ಲಾಡಳಿತಗಳಿಂದ ಅಗತ್ಯ ಸಿದ್ಧತೆ.

ಇಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ ಅವರ ಜನ್ಮದಿನ: ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ಗೌರವ ನಮನ.

ರಾಜ್ಯದಲ್ಲಿ ಹೆಚ್ಚುತ್ತಿರುವ ತಾಪಮಾನ: ಆರೋಗ್ಯದ ಹಿತದೃಷ್ಟಿಯಿಂದ ಮುಂಜಾಗ್ರತೆವಹಿಸಲು ಆರೋಗ್ಯ ಇಲಾಖೆ ಸಲಹೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತೆ 7 ಗಂಟೆ 35 ನಿಮಿಷಕ್ಕೆ

******